# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಎ.ರವೀಂದ್ರ, ಮಾನ್ಯ ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ,ಇವರ ನೇಮಕಾತಿಗೆ ಸಂಬಂಧಪಟ್ಟಂತೆ ಷರತ್ತು ಮತ್ತು ನಿಬಂಧನೆಗಳು

ಓದಲಾಗಿದೆ:

1. ಸರ್ಕಾರಿ ಆದೇಶ ಸಂಖ್ಯೆ ಪಿಡಿ 10 ಎಸ್‌ಪಿಬಿ 2005(ಭಾ) ಬೆಂಗಳೂರು ದಿನಾಂಕ 24.07.2006
2. ಸರ್ಕಾರಿ ಆದೇಶ ಸಂಖ್ಯೆ ಡಿಪಿಎಆರ್ 41 ಸೇಎಂಎ 2002 ದಿನಾಂಕ 17.06.2002
3. ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 82 ಸಿಸನೇ 2006 ದಿನಾಂಕ 29.08.2006

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಸಂಖ್ಯೆ (1) ರ ಆದೇಶದಲ್ಲಿ ಸರ್ಕಾರವು ಕರ್ನಾಟಕ ಸರ್ಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿಗಳಾದ ಶ್ರೀ ಎ.ರವೀಂದ್ರ ರವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರನ್ನಾಗಿ ನೇಮಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (2) ರ ಆದೇಶದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ ಡಿಪಿಎಆರ್ 41 ಸೇವಂಇ 2002 ದಿನಾಂಕ 17.06.2002ರಲ್ಲಿ ಸಚಿವರ ಸ್ಥಾನ ಮಾನ ನೀಡಿರುವ ಪ್ರಾಧಿಕಾರಿಗಳಿಗೆ ಯಾವ ಯಾವ ಸೌಲಭ್ಯಗಳನ್ನು ಒದಗಿಸಬಹುದು ಎನ್ನುವ ಬಗ್ಗೆ ಮಾರ್ಗಸೂಚಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (3) ರ ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 82 ಸಿಸನೇ 2006 ದಿನಾಂಕ 29.08.2006 ರಲ್ಲಿ ಸರ್ಕಾರವು ಶ್ರೀ ಎ.ರವೀಂದ್ರ ಅವರಿಗೆ ರಾಜ್ಯ ಸಚಿವರ ಸ್ಥಾನಮಾನವನ್ನು ನೀಡಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ದಿನಾಂಕ 17.06.2002 ರ ಆದೇಶದ ಪ್ರಕಾರ ರಾಜ್ಯ ಸಚಿವರಿಗೆ ನೀಡುವ

ಸೌಲಭ್ಯಗಳನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರಿಗೆ ನೀಡಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ

ಸರ್ಕಾರಿ ಆದೇಶ ಸಂಖ್ಯೆ ಪಿಡಿ 10 ಎಸ್‌ಪಿಬಿ 2006(ಭಾ)

ಬೆಂಗಳೂರು, ದಿನಾಂಕ 01.09.2006

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಶ್ರೀ ಎ.ರವೀಂದ್ರ, ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ, ಇವರು ದಿನಾಂಕ 27.07.2006 ರಿಂದ ಈ ಕೆಳಕಂಡ ಸೌಲಭ್ಯಗಳನ್ನು ಪಡೆಯಲು ಅರ್ಹರಿರುತ್ತಾರೆ.

1. ವೇತನ ಮತ್ತು ಭತ್ಯೆಗಳು: ಕರ್ನಾಟಕ ರಾಜ್ಯ ಸಚಿವರ ಸಂಬಳಗಳು ಮತ್ತು ಭತ್ಯೆಗಳ ಅಧಿನಿಯಮ 1956 ಮತ್ತು ಅದರ ಕೆಳಗೆ ರಚಿಸಿರುವ ನಿಯಮಗಳ ಪ್ರಕಾರ:-

ಅ) ಸಂಬಳ: ಪ್ರತಿ ತಿಂಗಳಿಗೆ ರೂ.4,000/-(ರೂಪಾಯಿ ನಾಲ್ಕು ಸಾವಿರ ಮಾತ್ರ)

ಆ) ಆತಿಥ್ಯ ಭತ್ಯೆ: ಒಂದು ವರ್ಷಕ್ಕೆ ರೂ.50,000/-(ರೂಪಾಯಿ ಐವತ್ತು ಸಾವಿರ ಮಾತ್ರ) ವನ್ನು ನಿಗದಿಪಡಿಸಲಾಗಿದೆ.

2. ಮನೆ ಬಾಡಿಗೆ ಭತ್ಯೆ: ಸ್ವಂತ ಮನೆಯಲ್ಲಿ ವಾಸಿಸಿದ್ದರೆ ರೂ.10,000+5,000 (ನಿರ್ವಹಣ ವೆಚ್ಚ) ಪ್ರತಿ ತಿಂಗಳಿಗೆ ರೂ.15,000/-(ರೂಪಾಯಿ ಹದಿನೈದು ಸಾವಿರ ಮಾತ್ರ) ನ್ನು ನಿಗದಿಪಡಿಸಲಾಗಿದೆ. ಖಾಸಗಿ ಮನೆಯನ್ನು ಬಾಡಿಗೆ ಪಡೆದಿದ್ದಲ್ಲಿ ಲೋಕೋಪಯೋಗಿ ಇಲಾಖೆಯ ಮೌಲ್ಯ ಮಾಪನಕ್ಕೆ ಒಳಪಟ್ಟು ಪ್ರತಿ ತಿಂಗಳಿಗೆ ರೂ.30,000/-(ರೂಪಾಯಿ ಮೂವತ್ತು ಸಾವಿರ ಮಾತ್ರ) ಗಳವರೆಗೆ ಬಾಡಿಗೆಯನ್ನು ಪಡೆಯಲು ಅರ್ಹರಿರುತ್ತಾರೆ.

3. ಪ್ರಯಾಣ ಭತ್ಯೆ ಮತ್ತು ದಿನಭತ್ಯೆ : ರಾಜ್ಯ ಸಚಿವರಿಗೆ ಅನ್ವಯಿಸುವ ಪ್ರಯಾಣ ಭತ್ಯೆ ನಿಯಮಗಳ ರೀತ್ಯಾ ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಗಳನ್ನು ಪಡೆಯಲು ಅರ್ಹರಿರುತ್ತಾರೆ.

4. ಈ ವೆಚ್ಚಗಳನ್ನು 2006-07 ನೇ ಸಾಲಿನಲ್ಲಿನ ಲೆಕ್ಕ ಶೀರ್ಷಿಕೆ 3451-00-101-4-00 ಯೋಜನಾ ಮಂಡಳಿ(ಯೋಜನೇತರ) ಇದರಲ್ಲಿ ಭರಿಸುವುದು.

5. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಪಿ 96, ದಿನಾಂಕ 10.07.1996 ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ನೀಡಲಾದ ಆರ್ಥಿಕ

ಅಧಿಕಾರಗಳ ಪ್ರತ್ಯಾಯೋಜನೆಯನ್ನು ಹಾಗು ಸರ್ಕಾರಿ ಆದೇಶ ಸಂಖ್ಯೆ ಪಿಡಿ 17 ಎಸ್‌ಪಿಎಂ 96 ದಿನಾಂಕ 17.05.1997 ರಲ್ಲಿ ರಾಜ್ಯ ಯೋಜನಾ ಮಂಡಳಿಯ ಸದಸ್ಯ ಕಾರ್ಯದರ್ಶಿಗಳಿಗೆ ನೀಡಲಾದ ಅಧಿಕಾರ ಪ್ರತ್ಯಾಯೋಜನೆಯನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಎಸ್.ಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಯೋಜನೆ ಮತ್ತು ಸಾಂಖ್ಯಿಕ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.(ಎ ಮತ್ತು ಇ)(1 ಮತ್ತು 2)
2. ಶ್ರೀ ಎ. ರವೀಂದ್ರ, ಮಾನ್ಯ ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಯೋಜನೆ ಮತ್ತು ಸಾಂಖ್ಯಿಕ ಇಲಾಖೆ
4. ಜಂಟಿ ಕಾರ್ಯದರ್ಶಿಗಳು(ಆಡಳಿತ-2), ಯೋಜನೆ ಮತ್ತು ಸಾಂಖ್ಯಿಕ ಇಲಾಖೆ
5. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ.(ರಾಜ್ಯ ಶಿಷ್ಟಾಚಾರ)
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ 7/8)
7. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ(ರಾಜ್ಯ ಶಿಷ್ಟಾಚಾರ)
8. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
9. ಲೆಕ್ಕಾಧಿಕಾರಿಗಳು, ರಾಜ್ಯ ಯೋಜನಾ ಮಂಡಳಿ
10. ರಕ್ಷಾ ಕಡತ ಹಾಗೂ ಹೆಚ್ಚುವರಿ ಪ್ರತಿಗಳು